**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್ ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:08-09-2020

# ಆದೇಶ

1. ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ: 40-3/2020-ಡಿಎಂ-ಐ(ಎ), ದಿನಾಂಕ:29.08.2020ರಲ್ಲಿ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಇನ್ನೂ ಹೆಚ್ಚಿನ ಕಾರ್ಯಚಟುವಟಿಕೆಗಳನ್ನು ಪುನರಾರಂಭಿಸಲು ಹಾಗೂ ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅವಧಿಯನ್ನು ದಿನಾಂಕ:30.09.2020ರ ವರೆಗೆ ವಿಸ್ತರಿಸಲು ತೆರವು-4 ರ ಮಾರ್ಗಸೂಚಿಗಳನ್ನು ಹೊರಡಿಸಿದೆ.

2. ಅದರಂತೆ, ರಾಜ್ಯ ಸರ್ಕಾರವು ಸಹ ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:31.08.2020ರಲ್ಲಿ ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅವಧಿಯನ್ನು ವಿಸ್ತರಿಸಲು ಮತ್ತು ಕಂಟೈನ್‌ಮೆಂಟ್ ಹೊರಗಿನ ಪ್ರದೇಶಗಳಲ್ಲಿ ಇನ್ನೂ ಹೆಚ್ಚಿನ ಕಾರ್ಚಟುವಟಿಕೆಗಳನ್ನು ಪುನರಾರಂಭಿಸಲು ತೆರವು-4 ಮಾರ್ಗಸೂಚಿಗಳನ್ನು ಜಾರಿಗೊಳಿಸಿರುತ್ತದೆ.

3. ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:18.05.2020ರಲ್ಲಿ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿ ರಾಜ್ಯಾದ್ಯಂತ ಎಲ್ಲಾ ಸರ್ಕಾರಿ/ಪುರಸಭೆ ಉದ್ಯಾನವನಗಳನ್ನು ಬೆಳಿಗ್ಗೆ 7 ರಿಂದ 9 ಗಂಟೆಯವರೆಗೆ ಮತ್ತು ಸಂಜೆ 4 ರಿಂದ 7 ಗಂಟೆಯವರೆಗೆ ಸಾರ್ವಜನಿಕರಿಗಾಗಿ ತೆರೆಯಲು ಆದೇಶಿಸಲಾಗಿರುತ್ತದೆ. ನಂತರ, ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:20.06.2020ರಲ್ಲಿ ಈ ಉದ್ಯಾನವನಗಳನ್ನು ತೆರೆಯುವ ಅವಧಿಯನ್ನು ಬೆಳಿಗ್ಗೆ 5 ಗಂಟೆಯಿಂದ ರಿಂದ ರಾತ್ರಿ 9 ಗಂಟೆಯವರೆಗೆ ನಿಗದಿಪಡಿಸಲು ಸ್ಥಳೀಯ ಮಹಾನಗರ ಪಾಲಿಕೆ/ಪಾಲಿಕೆಗಳಿಗೆ ಆದೇಶಿಸಲಾಗಿರುತ್ತದೆ.

4. ಪ್ರಸ್ತುತ, ಕೇಂದ್ರ ಗೃಹ ಮಂತ್ರಾಲಯದ ಆದೇಶವನ್ನು ಅನುಸರಿಸಿ, ರಾಜ್ಯಸರ್ಕಾರವು ತೆರವು-4ರ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸದರಿ ಮಾರ್ಗಸೂಚಿಗಳು ದಿನಾಂಕ:30.09.2020 ರವರೆಗೆ ಜಾರಿಯಲ್ಲಿರುತ್ತವೆ. ಈ ಅವಧಿಯಲ್ಲಿ ಮತ್ತು ಮುಂದಿನ ಆದೇಶದವರೆಗೆ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿ ಇತರೆ ಎಲ್ಲಾ ವಲಯಗಳಲ್ಲಿನ ಸಾರ್ವಜನಿಕ ಉದ್ಯಾನವನಗಳು ಮತ್ತು ಉದ್ಯಾನವನದೊಳಗಿನ ಕೋವಿಡ್ ಪೂರ್ವದಲ್ಲಿ ಬಳಕೆಯಲ್ಲಿದ್ದ ರಸ್ತೆಗಳನ್ನು ಸಂಪೂರ್ಣವಾಗಿ ಸಾರ್ವಜನಿಕರಿಗೆ ಮುಕ್ತಗೊಳಿಸಲು ಅಂದರೆ, ಲಾಕ್‌ಡೌನ್ ಅವಧಿಯ ಪೂರ್ವದ ಸ್ಥಿತಿಯಲ್ಲಿದ್ದಂತೆ ಮುಂದುವರೆಸಿ ಆದೇಶಿಸಿದೆ.

5. ಕೋವಿಡ್-19 ಸೋಂಕು ನಿಯಂತ್ರಿಸುವ ಸಂಬಂಧದಲ್ಲಿ ಹೊರಡಿಸಿದ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ, ಸಂಬಂಧಿಸಿದ ಇಲಾಖೆಗಳು ಮತ್ತು ಪ್ರಾಧಿಕಾರಗಳು ಸಾರ್ವಜನಿಕ ಉದ್ಯಾನವನಗಳನ್ನು ಮತ್ತು ಅದರೊಳಗಿನ ಕೋವಿಡ್ ಪೂರ್ವದಲ್ಲಿ ಬಳಕೆಯಲ್ಲಿದ್ದ ರಸ್ತೆಗಳನ್ನು ಸಾರ್ವಜನಿಕರ ಮುಕ್ತ ಪ್ರವೇಶಕ್ಕೆ ಅನುಮತಿಸತಕ್ಕದ್ದು.

**(ಅಂಜುಂ ಪರ್ವೇಜ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.